# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.30/ಪಿಆರ್:31:2021-22 ದಿನಾಂಕ:11.02.2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)/ಪಿಆರ್/35/2020-21, ದಿ.16.04.2021ರ ಆದೇಶದಂತೆ ದಿ.11.02.2022 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ.14ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

ಸಭೆಗೆ ಹಾಜರಾಗಿದ್ದವರ ವಿವರಗಳು:-

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ.ಮರುಳಸಿದ್ದಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು |
| 2 | ಶ್ರೀ.ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.14, ಬಾಗಲಗುಂಟೆ |
| 3 | ಶ್ರೀ.ಮಹದೇವಯ್ಯ | ತೋಟಗಾರಿಕೆ ವಿಭಾಗ, ದಾಸರಹಳ್ಳಿ ವಲಯ |
| 4 | ಶ್ರೀ.ಡಾ॥ ಹರ್ಷಿತ್ | ಮೆಡಿಕಲ್ ಆಫೀಸರ್, ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ |
| 5 | ಶ್ರೀ.ಚೈತ್ರ ಎಂ | ಕಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ.ಮಂಜುನಾಥ್ ಡಿ | ವಾಟರ್ ಇನ್ಸ್‌ಪೆಕ್ಟರ್ |
| 7 | ಶ್ರೀ.ರವಿಕುಮಾರ್ | ವಾಟರ್ ಇನ್ಸ್‌ಪೆಕ್ಟರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ ಬಾಗಲಗುಂಟೆ |
| 8 | ಶ್ರೀ.ಕೆ.ಡಬ್ಲ್ಯೂ.ರಾಜಪ್ಪ | ವಲಯ ಅರಣ್ಯಾಧಿಕಾರಿಗಳು |
| 9 | ಶ್ರೀ.ವಾಸು | ಎಸ್.ಡಬ್ಲ್ಯೂ.ಎಂ ಗುತ್ತಿಗೆದಾರರು |
| 10 | ಶ್ರೀ.ಮೋಹನ್ ಗೌರೋಜಿ | ಹಿರಿಯ ಆರೋಗ್ಯ ನಿರೀಕ್ಷಕರು |
| 11 | ಶ್ರೀ.ಶಿವಲಿಂಗಯ್ಯ | ರೆವಿನ್ಯೂ ಇನ್ಸ್‌ಪೆಕ್ಟರ್ |
| 12 | ಶ್ರೀ.ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ |
| 13 | ಶ್ರೀ.ಸದಾಶಿವ | ನಾಗರೀಕ ಹಿತ ರಕ್ಷಣಾ ಸಮಿತಿ, ಎಂ.ಇ.ಐ ಬಡಾವಣೆ |
| 14 | ಶ್ರೀ.ಇ ಹನುಮಂತಪ್ಪ | ನಾಗರೀಕ ಹಿತ ರಕ್ಷಣಾ ಸಮಿತಿ , ಹಾವನೂರು ಬಡಾವಣೆ |
| 15 | ಶ್ರೀ.ರಾಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ, ಭುವನೇಶ್ವರಿನಗರ |
| 16 | ಶ್ರೀ.ಮುದ್ದಹನುಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು, ಸಿಡೇದಹಳ್ಳಿ |

ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆಧ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

**ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿನ ನಿಸರ್ಗ ಬಡಾವಣೆ, ಬಿ.ಟಿ.ಎಸ್ ಬಡಾವಣೆ ಪ್ರದೇಶಗಳಿಗೆ ಸರಿಯಾದ ಪ್ರಮಾಣದಲ್ಲಿ ನೀರು ಸರಬರಾಜು ಆಗದೆ ಇರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಸಭೆಯ ಗಮನಕ್ಕೆ ತಂದರು ಈ ಬಗ್ಗೆ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಪ್ರತಿನಿಧಿಗಳು ಸದರಿ ಭಾಗದಲ್ಲಿ ಅನಿಯಮಿತ ವಿದ್ಯುತ್ ಸರಬರಾಜುನಿಂದಾಗಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿರುವುದಾಗಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸುಧೀರ್ಘವಾಗಿ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

ಕ್ರಮ:ಸಹಾಯಕ ಅಭಿಯಂತರರು ವಾ-14/ಸದಸ್ಯ ಕಾರ್ಯದರ್ಶಿ

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಘನತ್ಯಾಜ್ಯ ವಿಲೇವಾರಿ ಮಾಡಲು ಕ್ರಮವಹಿಸುತ್ತಿರುವುದಾಗಿ ಸಭೆಗೆ ತಿಳಿಸಿದರು ಹಾಗೂ ಸಂಬಂಧಿಸಿದ ಗುತ್ತಿಗೆದಾರರು ಹಾಗೂ ಮೇಲ್ವಿಚಾರಕರುಗಳು ಹಾಜರಿದ್ದು, ಘನತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು ಸೂಚಿಸಲಾಯಿತು.

ಕ್ರಮ:ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು

- **ಕಾನೂನು ಮತ್ತು ಸುವ್ಯವಸ್ಥೆ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಬಗ್ಗೆ ಚರ್ಚಿಸಲಾಯಿತು. ಹಾವನೂರು ಬಡವಣೆಯ ಪೋಲೀಸ್ ಚೌಕಿಗೆ ಸಿಬ್ಬಂದಿಯನ್ನು ಒದಗಿಸುವ ಕುರಿತು ಹಾಗೂ ಸಿದ್ದೇಶ್ವರ ಬಡಾವಣೆಯ ಪೋಲೀಸ್ ಬೀಟ್ ಪಾಯಿಂಟ್ ಒದಗಿಸುವಂತೆ ಮತ್ತು ಅಗತ್ಯವಿರುವ ಕಡೆ ಸಿ.ಸಿ ಟಿವಿ ಕ್ಯಾಮರಾಗಳನ್ನು ಅಳವಡಿಸುವ ಬಗ್ಗೆ ಸಭೆಯ ಗಮನಕ್ಕೆ ತಂದರು. ಸಭೆಯಲ್ಲಿ ಹಾಜರಿದ್ದ ಪೋಲೀಸ್ ಇಲಾಖೆಯ ಸಿಬ್ಬಂದಿಗಳು ವಿಷಯವನ್ನು ಮೇಲಾಧಿಕಾರಿಗಳ ಗಮನಕ್ಕೆ ತರುವುದಾಗಿ ತಿಳಿಸಿದರು.

- **ಇತರೆ ವಿಷಯಗಳ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆಗಳಲ್ಲಿ ಗುಂಡಿ ಮುಚ್ಚುವ/ಡಾಂಬರೀಕರಣ ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಅಧಿಕೃತ ಕಟ್ಟಡಗಳ ಬಗ್ಗೆ ಅಗತ್ಯ ಕ್ರಮ ವಹಿಸುತ್ತಿರುವುದಾಗಿ ವಾರ್ಡ್ ಅಭಿಯಂತರರು ತಿಳಿಸಿದರು.

ಸಿಡೇದಹಳ್ಳಿ 110 ಹಳ್ಳಿಗಳ ವ್ಯಾಪ್ತಿಯಲ್ಲಿ ರಸ್ತೆ ಡಾಂಬರೀಕರಣ ಕಾಮಗಾರಿಯನ್ನು ನಿರ್ವಹಿಸುತ್ತಿದ್ದು, ರಸ್ತೆ ನಿರ್ಮಾಣಕ್ಕೆ ತೊಂದರೆಯಾಗುವ ಗಿಡಗಳ ಕೊಂಬೆಗಳನ್ನು ತುರ್ತಾಗಿ ತೆಗೆಯಲು ವಲಯ ಅರಣ್ಯಾಧಿಕಾರಿಗಳಿಗೆ ಸೂಚಿಸಲಾಯಿತು.

ಬೆಸ್ಕಾಂ ಇಲಾಖೆಯವರು ಡಿಫೆನ್ಸ್ ಕಾಲೋನಿ, ಬ್ರಾಹ್ಮಣರ ಸಂಘದ ಹತ್ತಿರ ಇರುವ ವಿದ್ಯುತ್ ಕಂಬವನ್ನು ಈ ಹಿಂದೆಯೇ ಬದಲಾಯಿಸಲು ಸೂಚಿಸಿದರೂ ಸಹ ಇಲ್ಲಿಯವರೆವಿಗೂ ಬದಲಾಯಿಸಿರುವುದಿಲ್ಲ, ಆದುದರಿಂದ ತುರ್ತಾಗಿ ಸದರಿ ಕಂಬವನ್ನು ತುರ್ತಾಗಿ ಬದಲಾಯಿಸಲು ಸೂಚಿಸಲಾಯಿತು.

ಕ್ರಮ:ಸ.ಅ ವಾ.14/ ಸ.ಕಾ.ನಿ.ಅ (ದಾಸರಹಳ್ಳಿ ಉಪ-ವಿಭಾಗ)

ಸಹಾಯಕ ಅಭಿಯಂತರರು
ಹಾಗೂ ಸದಸ್ಯ ಕಾರ್ಯದರ್ಶಿ ವಾರ್ಡ್ ಸಮಿತಿ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು, ವಾ.ಸಂ.14, ಬಾಗಲಗುಂಟೆ
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಅಧಿಕಾರಿಗಳ ಮಾಹಿತಿಗಾಗಿ:-</u>

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಆರೋಗ್ಯ ವೈದ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
9) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಲ್ಯಾಣಾಧಿಕಾರಿಗಳು (ದಾವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14) ಕಛೇರಿ ಪ್ರತಿ.